ಆ) ರಾಯಚೂರು ಕೈಗಾರಿಕಾ ಬೆಳವಣಿಗೆ ಕೇಂದ್ರ ಅಭಿವೃದ್ಧಿಗಾಗಿ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿಯು ಒಟ್ಟು ರೂ.28.67 ಕೋಟಿ ವೆಚ್ಚ ಮಾಡಿದ್ದು, ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ. ಆದರೆ ಕೈಗಾರಿಕೋದ್ಯಮಿಗಳು ಈ ಬೆಳವಣಿಗೆ ಕೇಂದ್ರದಲ್ಲಿ ತಮ್ಮ ಘಟಕಗಳನ್ನು ಸ್ಥಾಪಿಸಲು ಮುಂದು ಬರುತ್ತಿಲ್ಲ.

ಇ) ರಾಯಚೂರು ಸೇರಿದಂತೆ ರಾಜ್ಯದ ಮೂರು ಬೆಳವಣಿಗೆ ಕೇಂದ್ರಗಳಲ್ಲಿ ಹೆಚ್ಚಿನ ಕೈಗಾರಿಕೆಗಳನ್ನು ಆಕರ್ಷಿಸಲು ಸರ್ಕಾರ ಪ್ರಯತ್ನ ನಡೆಸುತ್ತಿದೆ.

ಈ) ಒಂದು ಕಡೆ ರಾಯಚೂರು ಕೈಗಾರಿಕಾ ಬೆಳವಣಿಗೆ ಕೇಂದ್ರಕ್ಕೆ ಹೆಚ್ಚಿನ ಭಾರಿ ಮತ್ತು ಮಧ್ಯಮ ಕೈಗಾರಿಕೆಗಳನ್ನು ಆಕರ್ಷಿಸುವ ಪ್ರಯತ್ನವನ್ನು ಸರ್ಕಾರ ನಡೆಸಿದ್ದು, ಮತ್ತೊಂದು ಕಡೆ ಜಿಲ್ಲೆ ನಿರುದ್ಯೋಗ ಯುವಕ ಯುವತಿಯರ ಸ್ವಯಂ ಉದ್ಯೋಗದಲ್ಲಿ ತೊಡಗಲು ಪ್ರಧಾನ ಮಂತ್ರಿಗಳ ರೋಜ್‌ಗಾರ್ ಯೋಜನೆಯಡಿಯಲ್ಲಿ ವಾಣಿಜ್ಯ ಬ್ಯಾಂಕುಗಳ ಸಹಯೋಗದೊಂದಿಗೆ ಕೈಗಾರಿಕೆ /ಸೇವೆ /ವ್ಯಾಪಾರ ಚಟುವಟಿಕೆಗಳಿಗಾಗಿ ಆರ್ಥಿಕ ನೆರವು ನೀಡಲಾಗುತ್ತಿದೆ.

ಉ) ಈಗ ಕಚ್ಚಾ ಸಾಮಗ್ರಿ ಲಭ್ಯತೆಯ ದೃಷ್ಟಿಯಿಂದಾಗಿ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಗಳು ಬಳ್ಳಾರಿ ಜಿಲ್ಲೆಯಲ್ಲಿ ಕೇಂದ್ರೀಕೃತವಾಗಿವೆ. ಆದರೆ ಮತ್ತಷ್ಟು ಹೊಸ ಕಾರ್ಖಾನೆಗಳಿಗೆ ನೀರಿನ ಸೌಲಭ್ಯ ಕಲ್ಪಿಸುವಲ್ಲಿ ತೊಂದರೆ ಇರುವುದರಿಂದ ಹೊಸ ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಗಳನ್ನು ರಾಯಚೂರು ಬೆಳವಣಿಗೆ ಕೇಂದ್ರದಲ್ಲಿ ಸ್ಥಾಪಿಸಬಹುದೆಂಬ ಅಂಶವನ್ನು ಉದ್ಯಮಿಗಳ ಗಮನಕ್ಕೆ ತರಲಾಗಿದೆ ಹಾಗೂ ಈ ಕೇಂದ್ರವು ಉತ್ತಮ ನೀರಿನ ಸೌಕರ್ಯ ವಿದ್ಯುಚ್ಛಕ್ತಿ ಲಭ್ಯತೆ ಹಾಗೂ ರೈಲ್ವೆ ಸಂಪರ್ಕ ಹೊಂದಿರುವ ಅಂಶವನ್ನು ಉದ್ದಿಮೆಗಳಲ್ಲಿ ಒತ್ತಿ ಹೇಳಲಾಗಿದೆ. ಇದರಿಂದಾಗಿ ಮುಂಬರುವ ದಿನಗಳಲ್ಲಿ ರಾಯಚೂರು ಬೆಳವಣಿಗೆ ಕೇಂದ್ರದಲ್ಲಿ ಹೆಚ್ಚು ಕಬ್ಬಿಣ ಮತ್ತು ಉಕ್ಕು ಕಾರ್ಖಾನೆಗಳು ಸ್ಥಾಪಿತಗೊಳ್ಳುವ ನಿರೀಕ್ಷೆಯಿದೆ.

2687 (2302) ಶ್ರೀ ಪಾಪರೆಡ್ಡಿ ಎ. (ರಾಯಚೂರು) :– ಮಾನ್ಯ ಸಹಕಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹೈದ್ರಾಬಾದ್ ಕರ್ನಾಟಕದ ರಾಯಚೂರಿನಲ್ಲಿರುವ ಏಕೈಕ ಕೋ–ಆಪರೇಟಿವ್ ಸ್ಪಿನ್ನಿಂಗ್ ಮಿಲ್ ಈಗ ಮುಚ್ಚಿಹೋಗಿರುವುದು ಸರ್ಕಾರದ ಗಮನದಲ್ಲಿರುವುದೇ;

ಆ) ಈ ಸ್ಪಿನ್ನಿಂಗ್ ಮಿಲ್ ಪ್ರಾರಂಭಕ್ಕೆ ಕೈಗೊಂಡ ಕ್ರಮಗಳಾವುವು;

ಇ) ಒಂದು ಸಾವಿರ ಕಾರ್ಮಿಕರು ಬೀದಿ ಪಾಲಾಗಿರುವುದರಿಂದ ಇದರ ಇತ್ಯರ್ಥಕ್ಕೆ ಸರ್ಕಾರ ಏನು ಕ್ರಮ ತೆಗೆದುಕೊಂಡಿದೆ?

ಶ್ರೀ ಆರ್.ವಿ. ದೇಶಪಾಂಡೆ (ಸಹಕಾರ ಮಂತ್ರಿಗಳು) :

ಅ) ಹೌದು.

ಆ) ರಾಜ್ಯ ಸರ್ಕಾರವು ಈ ಗಿರಣಿಯನ್ನು ಗುತ್ತಿಗೆ ನೀಡಲು ತೀರ್ಮಾನಿಸಿ ದಿ: 27-6-98 ರಂದು ಆದೇಶವನ್ನು ಹೊರಡಿಸಲಾಗಿತ್ತು. ಈ ಸಂಬಂಧ ಗಿರಣಿಯ ಪುನರ್ ಪ್ರಾರಂಭಕ್ಕಾಗಿ ರೂ.50.00 ಲಕ್ಷಗಳ ಶೇರು ಬಂಡವಾಳವನ್ನು ಮಂಜೂರು ಮಾಡಲು ಮತ್ತು ರಾಯಚೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ರೂ.30.00 ಲಕ್ಷ ಸಾಲ ಪಡೆಯಲು ತೀರ್ಮಾನಿಸಲಾಗಿತ್ತು. ರಾಜ್ಯ ಸರ್ಕಾರವು ರೂ.25.00 ಲಕ್ಷಗಳ ಶೇರು ಹಣವನ್ನು ಮೊದಲನೇ ಕಂತಾಗಿ ಬಿಡುಗಡೆ ಮಾಡಿತ್ತು. ಆದರೂ ಗಿರಣಿಯನ್ನು ಗುತ್ತಿಗೆ ಆಧಾರದ ಮೇಲೆ ನೀಡಲಾಗದೆ ಪುನಃ ಪ್ರಾರಂಭವಾಗಲಿಲ್ಲ. ಪ್ರಸ್ತುತ ರಾಜ್ಯ ಸರ್ಕಾರವು ಈ ಗಿರಣಿಯ ಬಗ್ಗೆ ಸಿಟ್ರಾ ಸಂಸ್ಥೆಯಿಂದ ಅಧ್ಯಯನ ಮಾಡಿಸಿ ವರದಿ ಪಡೆಯಲು ತೀರ್ಮಾನಿಸಿದೆ.

ಇ) ಸಿಟ್ರಾ ಸಂಸ್ಥೆಯಿಂದ ವರದಿ ಪಡೆದು ಅಗತ್ಯ ಕ್ರಮ ಕೈಗೊಳ್ಳಲಾಗುವುದು.

2688 (3054) ಶ್ರೀ ಬಿ.ಸಿ. ಪಾಟೀಲ್ (ಹಿರೇಕೆರೂರು) :- ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸತತ ಬರಗಾಲದಿಂದ 2004-05ನೇ ಸಾಲಿಗೆ ಹಿರೇಕೆರೂರು ತಾಲ್ಲೂಕಿನಲ್ಲಿ ಜಾನುವಾರುಗಳ ಮೇವಿನ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಮೇವಿನ ಕೊರತೆ ನೀಗಿಸಲು ಸರ್ಕಾರ ಯಾವ ಕ್ರಮ ತೆಗೆದುಕೊಳ್ಳುತ್ತದೆ;

ಇ) ಹಿರೇಕೆರೂರು ತಾಲ್ಲೂಕಿನ ಎತ್ತಿನಹಳ್ಳಿ ಎಂ.ಕೆ. (2) ಕಂಚೂರು (3) ಹಳ್ಳೂರು (4) ಮಡ್ಲೂರು ಗ್ರಾಮಗಳಲ್ಲಿನ ಪಶು ಚಿಕಿತ್ಸಾ ಘಟಕಗಳನ್ನು ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಪಶುಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸುವ ಪ್ರಕ್ರಿಯೆ ಈಗ ಯಾವ ಹಂತದಲ್ಲಿದೆ ಹಾಗೂ ಯಾವಾಗ ಮೇಲ್ದರ್ಜೆಗೇರಿಸಲಾಗುವುದು?

ಶ್ರೀ ಮೆರಾಜುದ್ದೀನ್ ಎನ್. ಪಟೇಲ್ (ಪಶು ಸಂಗೋಪನೆ ಮತ್ತು ವಕ್ಫ್ ಸಚಿವರು):

ಅ) ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಹಾಲಿ ಲಭ್ಯವಿರುವ ಮೇವು 10 ವಾರಗಳವರೆಗೆ ಸಾಕಾಗುತ್ತದೆ. ಜೂನ್ 2005 ರ ವೇಳೆಗೆ ಮೇವಿನ ಕೊರತೆ ಉಂಟಾಗುವ ಸಾಧ್ಯತೆ ಇದೆ.